ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು	:	ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1273
ಉತ್ತರಿಸಬೇಕಾದ ದಿನಾಂಕ	:	22.09.2021
ಉತ್ತರಿಸಬೇಕಾದ ಸಚಿವರು	:	ಮಾನ್ಯ ಪಶುಸಂಗೋಪನೆ ಸಚಿವರು.

ಕ್ರ. ಸಂ	ಪ್ರಶ್ನೆಗಳು	ಉತ್ತರಗಳು
ಅ	ಕರ್ನಾಟಕ ರಾಜ್ಯದಲ್ಲಿ ಹಾಲಿನ ಬೆಲೆ ಬೇರೆ ರಾಜ್ಯಗಳಿಗಿಂತ ಕಡಿಮೆ ದರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ	ಹಾಗಿದ್ದಲ್ಲಿ, ರಾಜ್ಯದಲ್ಲಿಯೂ ಸಹ ರೈತರಿಂದ ಖರೀದಿಸುವ ಹಾಲಿಗೆ ಬೆಲೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಕೋವಿಡ್-19ರ ಹಿನ್ನಲೆಯಲ್ಲಿ ದರ ಪರಿಷ್ಕರಣೆಯನ್ನು ಜನಸಾಮಾನ್ಯರನ್ನು ಗಮನದಲ್ಲಿರಿಸಿ ಪರಿಶೀಲಿಸಲಾಗುವುದು.
ಇ	ಈ ರೀತಿ ಬೆಲೆ ಹೆಚ್ಚಿಸುವುದರಿಂದ ರೈತರಿಗೆ ಹಾಗೂ ಹಸು ಸಾಕಾಣಿಕೆದಾರರಿಗೆ ಅನುಕೂಲವಾಗುವುದಿಲ್ಲವೇ;	ಈಗಾಗಲೇ ಕರ್ನಾಟಕ ಹಾಲು ಮಹಾಮಂಡಳಿ ಮತ್ತು ಜಿಲ್ಲಾ ಹಾಲು ಒಕ್ಕೂಟಗಳು ಹಾಲು ಉತ್ಪಾದಕರಿಗೆ ಗುಣಮಟ್ಟಕ್ಕೆ ತಕ್ಕಂತೆ ಸಕಾಲದಲ್ಲಿ ಹಾಲಿನ ದರವನ್ನು ನೀಡುವುದರ ಜೊತೆಗೆ, ಸರ್ಕಾರದಿಂದ ಪ್ರತಿ ಲೀಟರ್‌ಗೆರೂ. 5/- ಪ್ರೋತ್ಸಾಹಧನ ದೊರಕುತ್ತಿದ್ದು, ತಾಂತ್ರಿಕ ಸೌಲಭ್ಯಗಳಾದ ಕೃತಕಗರ್ಭಧಾರಣೆ, ರಾಸುಗಳ ಪಶುವೈದ್ಯಕೀಯ ಚಿಕಿತ್ಸೆ ಮತ್ತು ರಾಸುಗಳು ಅನಿರೀಕ್ಷಿತ / ಅಕಾಲ ಮರಣ ಹೊಂದಿದ್ದಲ್ಲಿ ವಿಮಾ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ರೈತರ ಹಾಲಿನ ಖರೀದಿ ಬೆಲೆ ಹೆಚ್ಚಿಸಿದಲ್ಲಿ, ರೈತರಿಗೆ ಮತ್ತು ಹಸು ಸಾಕಾಣಿಕೆದಾರರಿಗೆ ಅನುಕೂಲವಾಗುತ್ತದೆ.
ಈ	ಹಾಗಿದ್ದಲ್ಲಿ, ರಾಜ್ಯದಲ್ಲಿ ಪ್ರಸ್ತುತವಿರುವ ಹಾಲಿನ ಬೆಲೆಯನ್ನು ಹೆಚ್ಚಿಗೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ;	ಕೋವಿಡ್-19ರ ತೀವ್ರತೆ ಮತ್ತು ಲಾಕ್‌ಡೌನ್‌ನಿಂದಾಗಿ ವ್ಯತಿರಿಕ್ತ ಆರ್ಥಿಕ ಪರಿಣಾಮ ಜನಸಾಮಾನ್ಯರ ಮೇಲೆ ಆಗುತ್ತಿರುವುದನ್ನು ಗಮನಿಸಿ, ಪರಿಶೀಲಿಸಲಾಗುವುದು.
ಉ	ಹಾಗಿದ್ದಲ್ಲಿ, ಎಂದಿನಿಂದ ಬೆಲೆ ಹೆಚ್ಚಿಸಲಾಗುವುದು: ಮತ್ತು ಇದನ್ನು ಎಂದಿನಿಂದ ಜಾರಿಗೆ ತರಲಾಗುವುದು.	ಮುಂದಿನ ದಿನಗಳಲ್ಲಿ ಪರಿಶೀಲಿಸಲಾಗುವುದು.

ಪಸಂಮೀ ಇ-248 ಸಲೆವಿ 2021

(ಪ್ರಭು ಬಿ ಚವ್ಹಾಣ್)
ಪಶುಸಂಗೋಪನೆ ಸಚಿವರು